**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಕೋಟಾ ಶ್ರೀನಿವಾಸ ಪೂಜಾರಿ, ಶ್ರೀ ಎಸ್. ರವಿಕುಮಾರ್, ಡಾ॥ ತೇಜಸ್ವಿನಿಗೌಡ ಮತ್ತು ಇತರರು ನಿಯಮ 72 ರಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ.**

ಪ್ರಶ್ನೆ: **ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಅಕ್ರಮ ಪಡಿತರ ಕಳ್ಳ ಸಾಗಾಣಿಕೆ ಸೇರಿದಂತೆ, ಅಕ್ರಮ ಚಟುವಟಿಕೆಗಳು, ಕಾನೂನು ಬಾಹಿರ ಅಪರಾಧಗಳು ಮಿತಿ ಮೀರಿದ್ದು, ಕೋಮು-ಗಲಭೆಗಳು ಪುನರಾವರ್ತಿತವಾಗುತ್ತಿದ್ದು, ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದ್ದು, ರಾಜ್ಯ ಸರ್ಕಾರ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲವಾಗಿರುವುದರ ಕುರಿತು.**

***

ಉತ್ತರ: ರಾಜ್ಯದಲ್ಲಿ ಅಕ್ರಮ ಪಡಿತರ ಕಳ್ಳಸಾಗಣೆ ಕುರಿತು ಮಾಹಿತಿಯನ್ನು ಸಂಗ್ರಹಿಸಿ, ದಾಳಿಗಳನ್ನು ಕೈಗೊಂಡು, ನಾಗರೀಕ ಅಗತ್ಯ ವಸ್ತುಗಳ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.

- ಅಕ್ರಮ ಚಟುವಟಿಕೆಗಳು ಮತ್ತು ಕಾನೂನು ಬಾಹಿರ ಅಪರಾಧಗಳನ್ನು ನಿಯಂತ್ರಿಸಲು ಠಾಣಾ ಮಟ್ಟದಲ್ಲಿ ಗುಪ್ತ ಮಾಹಿತಿ ಸಿಬ್ಬಂದಿ/ಬೀಟ್ ಸಿಬ್ಬಂದಿಗಳ ಮುಖೇನ ಗುಪ್ತ ಮಾಹಿತಿಯನ್ನು ಸಂಗ್ರಹಿಸಿ, ಅಕ್ರಮ ಚಟುವಟಿಕೆಗಳು ಮತ್ತು ಕಾನೂನು ಬಾಹಿರ ಅಪರಾಧಗಳು ಕಂಡು ಬಂದಲ್ಲಿ ಪ್ರಕರಣಗಳನ್ನು ದಾಖಲಿಸಿ ತಪ್ಪಿತಸ್ಥರನ್ನು ಬಂಧಿಸಿ ಸೂಕ್ತ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ.

- ಕಾನೂನು ಬಾಹಿರ ಚಟುವಟಿಕೆಗಳು ಕಂಡು ಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಂಡು, ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರಕರಣಗಳಲ್ಲಿ ಭಾಗಿಯಾದ ವ್ಯಕ್ತಿಗಳ ಚಲನ-ವಲನಗಳ ಮೇಲೆ ನಿಗಾಯಿಡಲು ರೌಡಿ/ಎಂಓಬಿ ಹಾಳೆಗಳನ್ನು ತೆರೆದು ನಿಗಾವಹಿಸಲಾಗುತ್ತಿದೆ.

- ರೂಢಿಗತ ಅಪರಾಧಿಗಳ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸಲು ಭದ್ರತಾ ಕಾಯ್ದೆಯಡಿ ಪಿ.ಎ.ಆರ್‌ಗಳನ್ನು ದಾಖಲಿಸಿ ಸಂಬಂಧಪಟ್ಟ ತಾಲೂಕು ದಂಡಾಧಿಕಾರಿಗಳಿಂದ ಯಾವುದೇ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳದಂತೆ ಮುಚ್ಚಳಿಕೆಯನ್ನು ಪಡೆಯಲಾಗುತ್ತಿದೆ.

- ಮಾದಕ ದ್ರವ್ಯ ವಿರೋಧಿ ದಿನಾಚಾರಣೆ, ಅಪರಾಧ ತಡೆ ಮಾಸಾಚರಣೆಗಳನ್ನು ಆಚರಿಸುವುದರೊಂದಿಗೆ ಸಾರ್ವಜನಿಕರಲ್ಲಿ ಮಾದಕ ದ್ರವ್ಯ ವ್ಯಸನದ ಅಪಾಯಗಳ ಬಗ್ಗೆ, ಅಪರಾಧ ಕೃತ್ಯಗಳ ಬಗ್ಗೆ ಜಾಗೃತಿಯನ್ನು ಮೂಡಿಸಿ ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸುವ ನಿಟ್ಟಿನಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಅರಿವು ಕಾರ್ಯಾಗಾರಗಳು, ಜಾಗೃತಿ ಜಾಥಾಗಳನ್ನು ಕೈಗೊಳ್ಳಲಾಗುತ್ತಿದ್ದು, ಜನ ನಿಬಿಡ ಸ್ಥಳಗಳಲ್ಲಿ ಜಾಗೃತಿ ಫಲಕಗಳನ್ನು ಅಳವಡಿಸುವ ಮೂಲಕ ಹಾಗೂ ಸಾಮಾಜಿಕ ಜಾಲ ತಾಣಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.

- ಕೋಮುಗಲಭೆಗಳು ಜರುಗದಂತೆ ಮುಂಜಾಗ್ರತಾ ಕ್ರಮವಾಗಿ ಕೋಮು ಸೌಹಾರ್ದತೆಯನ್ನು ಕಾಪಾಡುವ ನಿಟ್ಟಿನಲ್ಲಿ ಶಾಂತಿ ಸಮಿತಿ, ಮೊಹಲ್ಲಾ ಸಭೆ, ಯೂತ್ ಕಮಿಟಿ ಮೀಟಿಂಗ್, ಜನ

..2

ಸಂಪರ್ಕ ಸಭೆ, ಶಾಲಾ ಕಾಲೇಜುಗಳಲ್ಲಿ ಅಪರಾಧ ತಡೆಗಟ್ಟುವ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಮತ್ತು ಬೀಟ್ ಸಭೆ ನಡೆಸುವ ಮೂಲಕ ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ಪ್ರಾಮುಖ್ಯತೆ ನೀಡಲಾಗುತ್ತಿರುತ್ತದೆ. ಹಾಗೂ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಜಿಲ್ಲೆಯ ಅಧೀನ ಅಧಿಕಾರಿಗಳಿಗೆ ಸಲಹೆ-ಸೂಚನೆಗಳನ್ನು ನೀಡಲಾಗಿದೆ.

➢ ಶಾಂತಿ ಮತ್ತು ಸೌಹಾರ್ದತೆಯನ್ನು ಹಾಳು ಮಾಡುವ ವ್ಯಕ್ತಿ ಮತ್ತು ಸಂಘಟನೆಗಳ ಮೇಲೆ ನಿಗಾ ಇಡಲಾಗಿರುತ್ತದೆ. ಮತ್ತು ಜಿಲ್ಲಾ ಮಟ್ಟದಲ್ಲಿ ಹಾಗೂ ಠಾಣಾ ಮಟ್ಟದಲ್ಲಿ ಸೋಷಿಯಲ್ ಮಾನಿಟರಿಂಗ್ ಸೆಲ್ ರಚನೆ ಮಾಡಿ, ಸಾಮಾಜಿಕ ಜಾಣತಾಣಗಳ ಮೂಲಕ ಸಾರ್ವಜನಿಕರಲ್ಲಿ ಕೋಮು- ಸೌಹಾರ್ದತೆಗೆ ದಕ್ಕೆ ತರುವಂತಹ ವ್ಯಕ್ತಿಗಳ ಮೇಲೆ ಸೂಕ್ತ ನಿಗಾಯಿಟ್ಟು, ಅಂತಹ ವ್ಯಕ್ತಿಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

➢ ಹಬ್ಬ ಹರಿದಿನಗಳಲ್ಲಿ ಠಾಣೆ, ಉಪವಿಭಾಗ, ಹಾಗೂ ಕಮಿಷನರೇಟ್ ಮಟ್ಟದಲ್ಲಿ ಸ್ಥಳೀಯ ಎಲ್ಲಾ ಧಾರ್ಮಿಕ ಮುಖಂಡರುಗಳ ಸಭೆಯನ್ನು ನಡೆಸಿ ಯಾವುದೇ ರೀತಿಯ ಕೋಮು ಗಲಭೆ, ಕೋಮು ಸಂಘರ್ಷಗಳಂತಹ ಘಟನೆಗಳಿಗೆ ಆಸ್ಪದ ನೀಡದಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿ ಯಾವುದೇ ರೀತಿಯ ಕಾನೂನು ಸುವ್ಯವಸ್ಥೆ ಮೇಲೆ ದಕ್ಕೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

➢ ಒಟ್ಟಾರೆಯಾಗಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ನಿಯಂತ್ರಣದಲ್ಲಿರುತ್ತದೆ.

**ಸಂಖ್ಯೆ: ಹೆಚ್‌ಡಿ 56 ಪಿಸಿಕ್ಯೂ 2023**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು.